ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೇಂದ್ರೀಕೃತ ದಾಖಲಾತಿ ಘಟಕ, ಕೆ.ಜಿ.ರಸ್ತೆ, ಬೆಂಗಳೂರು-560 009

ಸಂಖ್ಯೆ: CAC/04/ GPTR-2022/2022-23 ದಿನಾಂಕ:27-02-2023

## ಪ್ರಕಟಣೆ

2022ರ ಪದವೀಧರ ಪ್ರಾಥಮಿಕ ಶಿಕ್ಷಕ (6 ರಿಂದ 8ನೇ ತರಗತಿ) ವೃಂದದ ಹುದ್ದೆಗಳಿಗೆ ನೇಮಕಾತಿ (GPTR-2022) ಪ್ರಕ್ರಿಯೆಗೆ ಸಂಬಂಧಿಸಿದಂತೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ಕೈಗೊಂಡು ಅಗತ್ಯ ಪ್ರಕ್ರಿಯೆಗಳ ನಂತರ 1:2 ಪರಿಶೀಲನಾ ಪಟ್ಟಿಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಿ, ಜಿಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು ನೇಮಕಾತಿ ಪ್ರಾಧಿಕಾರಗಳ ಕಛೇರಿಯಲ್ಲಿ ಅಭ್ಯರ್ಥಿಗಳ ಮೂಲದಾಖಲೆಗಳ ಪರಿಶೀಲನೆಯ ನಂತರ 1:1 ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಿನಾಂಕ:18-11-2022 ರಂದು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿತ್ತು.

ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿ ಸಂಬಂಧ ಪ್ರಕಟಿಸಲಾದ 1:2 ಪರಿಶೀಲನಾ ಪಟ್ಟಿಯಲ್ಲಿನ ಅಭ್ಯರ್ಥಿಗಳ ಮೂಲದಾಖಲೆಗಳನ್ನು ಆಯಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಹಾಗೂ ನೇಮಕಾತಿ ಪ್ರಾಧಿಕಾರ, ಸಾರ್ವಜನಿಕ ಶಿಕ್ಷಣ ಇಲಾಖೆ ರವರುಗಳ ಕಛೇರಿ ಹಂತದಲ್ಲಿ ಪರಿಶೀಲಿಸುವ ವೇಳೆಯಲ್ಲಿ ಕೆಲವು ವಿವಾಹಿತ ಮಹಿಳಾ ಅಭ್ಯರ್ಥಿಗಳು ತಮ್ಮ ಆನ್‌ಲೈನ್ ಅರ್ಜಿಯಲ್ಲಿ ವೈವಾಹಿಕ ಸ್ಥಿತಿ ಬಗೆಗಿನ ಅಂಕಣದಲ್ಲಿ ವಿವಾಹಿತರೆಂದು, ಪತಿಯ ಹೆಸರನ್ನು ನಮೂದಿಸಿ, ಜಾತಿ ಪ್ರವರ್ಗದ ಮೀಸಲಾತಿ ಅಂಕಣದಲ್ಲಿ ತಮ್ಮ ತಂದೆ ಅಥವಾ ಪೋಷಕರ ಜಾತಿ ಮತ್ತು ಆದಾಯ ಪ್ರಮಾಣಪತ್ರವನ್ನು ಸಲ್ಲಿಸಿದ ಕಾರಣಕ್ಕಾಗಿ, **ಪ್ರವರ್ಗದ ಮೀಸಲಾತಿಯಿಂದ** GMಗೆ ಪರಿಗಣಿಸಿದ್ದರಿಂದ 1:1 ತಾತ್ಕಾಲಿಕ ಪಟ್ಟಿಯಿಂದ ಹೊರಗುಳಿದ ಕಾರಣ **ಮಾನ್ಯ** ಉಚ್ಚನ್ಯಾಯಾಲಯ, ಬೆಂಗಳೂರು ಇಲ್ಲಿ **W.P.No.23752/2022 (GM-CC) ರಲ್ಲಿ ಶ್ರೀಮತಿ ಅಕ್ಷತಾ ಚೌಗಲಾ ಮತ್ತು ಇತರರು ಹಾಗೂ ಕೆಲವು ವಿವಾಹಿತ ಮಹಿಳಾ ಅಭ್ಯರ್ಥಿಗಳು ದಾಖಲಿಸಿದ್ದ** ವಿವಿಧ ರಿಟ್ ಅರ್ಜಿಗಳಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ:30-01-2023 ರಂದು ನೀಡಿರುವ ತೀರ್ಪಿನಂತೆ, ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:07-02-2023 ರಂದು ನಡೆದ ಸಭೆಯ ನಡವಳಿ ಹಾಗೂ ಮಾನ್ಯ ಸರ್ಕಾರದ ಪತ್ರ.ಸಂಖ್ಯೆ: ಇಪಿ:79 ಪಿಬಿಎಸ್ 2023, ಬೆಂಗಳೂರು ದಿನಾಂಕ:23-02-2023 ರಂತೆ 2022ರ ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ:18-11-2022 ರಂದು ಪ್ರಕಟಿಸಲಾಗಿದ್ದ 1:1 ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ರದ್ದುಗೊಳಿಸಿದ್ದು, ಮಾನ್ಯ ಉಚ್ಚನ್ಯಾಯಾಲಯ ತೀರ್ಪಿನಂತೆ 1:1 ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಹೊಸದಾಗಿ ಸಿದ್ದಪಡಿಸಿ, ದಿನಾಂಕ:27-02-2023 ರಂದು ಇಲಾಖಾ ವೆಬ್‌ಸೈಟ್ https://schooleducation.kar.nic.in ನಲ್ಲಿ ಪ್ರಕಟಿಸಿದೆ.

ಸದರಿ 1:1 ತಾತ್ಕಾಲಿಕ ಆಯ್ಕೆಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಲು ದಿನಾಂಕ:01-03-2023 ರಿಂದ 04-03-2023 ರವರೆಗೆ ಕಾಲಾವಕಾಶ ನೀಡಿದೆ. ಅಭ್ಯರ್ಥಿಗಳು ತಮ್ಮ ಆಕ್ಷೇಪಣೆಯನ್ನು ಸಂಬಂಧಪಟ್ಟ ಜಿಲ್ಲೆಯ ಉಪನಿರ್ದೇಶಕರು (ಆಡಳಿತ) ಹಾಗೂ ನೇಮಕಾತಿ ಪ್ರಾಧಿಕಾರ ರವರ ಕಚೇರಿಯಲ್ಲಿ ಅಗತ್ಯ ದಾಖಲೆಗಳೊಂದಿಗೆ ಖುದ್ದಾಗಿ ಸಲ್ಲಿಸುವುದು. ದಿನಾಂಕ:04-03-2023ರ ನಂತರ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶವಿರುವುದಿಲ್ಲ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ